## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಡಿ.ಎಸ್. ಅರುಣ್. ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** **"ಗ್ರಾಮ ಪಂಚಾಯಿತಿಗಳು ಸ್ವಯಂ ಸರ್ಕಾರಗಳಾಗಿ ಕಾರ್ಯ ನಿರ್ವಹಿಸಲು ಅಗತ್ಯವಿರುವ ಕ್ರಮಗಳ ಬಗ್ಗೆ**

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕಾರ ಹಾಗೂ ಸಂವಿಧಾನದ 73 ನೇ ತಿದ್ದುಪಡಿಯ ಪ್ರಕಾರ ಗ್ರಾಮ ಪಂಚಾಯತಿಗಳು ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸುವ ಆಶಯಗಳನ್ನು ಒಳಗೊಂಡಿರುತ್ತದೆ.

ಗ್ರಾಮ ಪಂಚಾಯತಿಗಳು ಸ್ವಯಂ ಸರ್ಕಾರವಾಗಿ ಕಾರ್ಯನಿರ್ವಹಿಸಲು ಅಗತ್ಯವಾದಂತಹ ಬಲವರ್ಧನೆಯನ್ನು ಕೈಗೊಳ್ಳಲು ಸರ್ಕಾರವು ಕ್ರಮ ವಹಿಸುತ್ತಿದೆ. ಈ ನಿಟ್ಟಿನಲ್ಲಿ ಜವಾಬ್ದಾರಿ ನಕ್ಷೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ತಯಾರಿಸಿ, ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ಸಹಮತಿಗಾಗಿ ಕಳುಹಿಸಲಾಗಿದೆ. ಈ ಬಗ್ಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂಚಾಯತ್ ರಾಜ್) ರವರ ಅಧ್ಯಕ್ಷತೆಯಲ್ಲಿ ಸಂಬಂಧಿಸಿದ ಇಲಾಖೆಗಳ ಜೊತೆ ಸಭೆಯನ್ನು ನಡೆಸಲಾಗಿದೆ ಮತ್ತು ಜವಾಬ್ದಾರಿ ನಕ್ಷೆಯ ಪ್ರಾಮುಖ್ಯತೆಯನ್ನು ಇಲಾಖೆಗಳಿಗೆ ತಿಳಿಸಲಾಗಿದೆ. ಇದಲ್ಲದೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ 2 ಸಭೆಗಳನ್ನು ನಡೆಸಲಾಗಿದೆ. ಸರ್ಕಾರದ ಹಂತದಲ್ಲಿಯೂ ಕೂಡ ಸಭೆಯನ್ನು ನಡೆಸಿ ಶೀಘ್ರವಾಗಿ ತಮ್ಮ ಅಭಿಪ್ರಾಯವನ್ನು ತಿಳಿಸುವಂತೆ ಎಲ್ಲಾ ಸಂಬಂಧಿಸಿದ ಇಲಾಖೆಗಳಿಗೆ ಸೂಚಿಸಲಾಗಿದೆ. ಈ ನಿಟ್ಟಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಪಶುಸಂಗೋಪನೆ ಇಲಾಖೆಗಳು ತಮ್ಮ ಅಭಿಪ್ರಾಯವನ್ನು ತಿಳಿಸಿರುತ್ತಾರೆ. ಈ ಬಗ್ಗೆ ಇತರ ಇಲಾಖೆಗಳಿಂದ ಮಾಹಿತಿಯನ್ನು ಪಡೆದು ಜವಾಬ್ದಾರಿ ನಕ್ಷೆಯನ್ನು ಅಧಿಸೂಚಿಸಲಾಗುವುದು.

ಗ್ರಾಮ ಸಭೆಗಳನ್ನು ಬಲಗೊಳಿಸಲು ಈಗಾಗಲೇ ಹಲವಾರು ಸರ್ಕಾರದ ಆದೇಶಗಳನ್ನು ನೀಡಲಾಗಿದೆ. ಪ್ರಸ್ತುತ ಹೊಸದಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 3 (ಇ) ರಡಿಯಲ್ಲಿ ನಿಯಮಗಳನ್ನು ರಚಿಸಲಾಗಿದೆ. ಸರ್ಕಾರದ ಹಂತದಲ್ಲಿ ಅದು ಪರಿಶೀಲನೆಯಲ್ಲಿದ್ದು, ಶೀಘ್ರದಲ್ಲಿ ನಿಯಮಗಳನ್ನು ಅಧಿಸೂಚಿಸಲಾಗುವುದು. ಇಲಾಖೆಯು ಈಗಾಗಲೇ ಪಂಚತಂತ್ರ 2.0 ತಂತ್ರಾಂಶವನ್ನು ಹೊರತಂದಿದ್ದು, ಇದರಲ್ಲಿ ಸಭಾ ನಿರ್ವಹಣಾ ಘಟಕ (meeting management module) ಹೊಂದಿರುತ್ತದೆ. ಗ್ರಾಮ ಸಭೆಗಳು ಮತ್ತು ವಾರ್ಡ್ ಸಭೆಗಳಿಗೆ ಸಂಬಂಧಿಸಿದ ನೋಟಿಸ್ಗಳನ್ನು ಈ ತಂತ್ರಾಂಶದ ಮೂಲಕ ಹೊರಡಿಸುವುದು ಮತ್ತು ಸಭಾ ನಡವಳಿಗಳನ್ನು ಕೂಡಲೇ ಅಪ್‌ಲೋಡ್ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ಹೆಚ್ಚಿನ ಪಾರದರ್ಶಕತೆಯನ್ನು ನಿರ್ವಹಣೆ ಮಾಡಿದಂತಾಗುತ್ತದೆ.

ಗ್ರಾಮ ಪಂಚಾಯತಿಗಳಿಗೆ ಎಂಜಿಎನ್‌ಆರ್‌ಇಜಿ ಯೋಜನೆಯಡಿ, ಕೇಂದ್ರದ 15 ನೇ ಹಣಕಾಸು ಯೋಜನೆಯಡಿ, ರಾಜ್ಯ ಸರ್ಕಾರದ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಇದಲ್ಲದೆ ಸ್ವಚ್ಛತೆಯನ್ನು ಕಾಪಾಡುವ ಸಲುವಾಗಿ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಕಾರ್ಯನಿರ್ವಹಿಸುವ ಸಲುವಾಗಿ ಗ್ರಾಮ ಪಂಚಾಯತಿಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು, ಗ್ರೇಡ್-I/ಗ್ರೇಡ್ II ಗ್ರಾಮ ಪಂಚಾಯತಿ ಕಾರ್ಯದರ್ಶಿಗಳನ್ನು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ನೇಮಿಸಲಾಗುತ್ತಿದೆ. ಗ್ರಾಮ ಪಂಚಾಯತಿ ಹಂತದಲ್ಲಿ, ಡಾಟಾ ಎಂಟ್ರಿ ಆಪರೇಟರ್, ಕರವಸೂಲಿಗಾರ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, ಅಟೆಂಡೆಂಟ್, ಕ್ಲೀನರ್ಸ್, ವಾಟರ್ ಆಪರೇಟರ್ ಅನ್ನು ನೇಮಕ ಮಾಡಲಾಗುತ್ತಿದೆ.

ಮೇಲೆ ತಿಳಿಸಿರುವ ಸುಧಾರಣೆಗಳನ್ನು ಜಾರಿಗೊಳಿಸುವ ಮೂಲಕ ಗ್ರಾಮ ಪಂಚಾಯತಿಗಳು ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಸರ್ಕಾರವು ಕ್ರಮಕೈಗೊಳ್ಳುತ್ತಿದೆ.

ಸಂಖ್ಯೆ:RDPR 106 GPA 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.